ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಬೆಂಗಳೂರು ನಗರ ಮಾದಕ ವಸ್ತುಗಳ ಕೇಂದ್ರವಾಗುತ್ತಿರುವ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-

721 (723) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಬೆಂಗಳೂರು ನಗರದಲ್ಲಿ ಪತ್ತೆಯಾದ ಮಾದಕ ವಸ್ತು ಪ್ರಕರಣಗಳು ಎಷ್ಟು ; (ವರ್ಷಾವಾರು, ಪೊಲೀಸ್ ಠಾಣಾವಾರು ಮಾಹಿತಿ ಒದಗಿಸುವುದು)

(ಆ) ವಶಪಡಿಸಿಕೊಳ್ಳಲಾದ ಮಾದಕ ವಸ್ತುಗಳು ಯಾವುವು ; (ಪ್ರಮಾಣ, ವರ್ಷಾವಾರು ಮಾಹಿತಿ ಒದಗಿಸುವುದು)

(ಇ) ಮಾದಕ ವಸ್ತುಗಳನ್ನು ಸರಬರಾಜು ಮಾಡಿ ಸಾಮಾಜಿಕ ಸ್ವಾಸ್ತ್ಯಕ್ಕೆ ಧಕ್ಕೆ ತರುತ್ತಿರುವ ವ್ಯಕ್ತಿಗಳ ವಿರುದ್ಧ ಇದುವರೆವಿಗೆ ಕೈಗೊಂಡ ಕ್ರಮಗಳು ಏನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮದ ಕುರಿತಾಗಿ ವಿದ್ಯಾರ್ಥಿಗಳು ಹಾಗೂ ಯುವಜನತೆಗೆ ಅರಿವು ಮೂಡಿಸುವಲ್ಲಿ ಸರ್ಕಾರ ಮತ್ತು ವಿವಿಧ ಇಲಾಖೆಗಳು ಕೈಗೊಂಡಿರುವ ಕ್ರಮಗಳೇನು ಮತ್ತು ಫಲಶೃತಿ ಏನು ? (ಸಂಪೂರ್ಣ ಮಾಹಿತಿ ಒದಗಿಸುವುದು)